1. ಸಂತಾಪ ಸೂಚನೆ :

ವಿಷಯ : ಸಿತಾರ ಮಾಂತ್ರಿಕ ಪಂಡಿತ್ ರವಿಶಂಕರ್‌ರವರು ನಿಧನ ಹೊಂದಿರುವ ಬಗ್ಗೆ.

ಮಾನ್ಯ ಸಭಾಧ್ಯಕ್ಷರು: ಸಿತಾರ ಮಾಂತ್ರಿಕ ಪಂಡಿತ್ ರವಿಶಂಕರ್ ಅವರು ನಿಧನ ಹೊಂದಿರುವುದನ್ನು ಈ ಸದನಕ್ಕೆ ಅತ್ಯಂತ ವಿಷಾಯದಿಂದ ತಿಳಿಸಬಯಸುತ್ತೇನೆ.

ರವಿಶಂಕರ್ ಅವರು 7ನೇ ಏಪ್ರಿಲ್ 1920ರಂದು ಉತ್ತರ ಪ್ರದೇಶದ ವಾರಣಾಸಿಯಲ್ಲಿ ಜನಿಸಿರುತ್ತಾರೆ. ದಿವಂಗತರು ಭಾರತೀಯ ಸಂಗೀತ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರಲ್ಲದೆ ಸಿತಾರ ವಾದನದ ಮೋಡಿಯಿಂದ ಅಂತರಾಷ್ಟ್ರೀಯ ಮನ್ನಣೆಯನ್ನು ಗಳಿಸಿರುತ್ತಾರೆ.

ದಿವಂಗತರು 1986 ರಿಂದ 1992 ರವರೆಗೆ ರಾಜ್ಯಸಭಾ ಸದಸ್ಯರಾಗಿ ಸೇವೆ ಸಲ್ಲಿಸಿರುತ್ತಾರೆ. ರವಿಶಂಕರ್ ಅವರಿಗೆ ಅಂತರರಾಷ್ಟ್ರೀಯ ಸಂಗೀತ ಪ್ರಶಸ್ತಿ, ಗ್ರ್ಯಾಮಿ ಪ್ರಶಸ್ತಿ, ಪದ್ಮಭೂಷಣ, ಪದ್ಮವಿಭೂಷಣ ಮತ್ತು ಭಾರತ ರತ್ನ ಪ್ರಶಸ್ತಿಗಳು ಲಭಿಸಿರುತ್ತವೆ. ಪಂಡಿತ್ ರವಿಶಂಕರ್ ಅವರು ದಿನಾಂಕ: 12.12.2012 ರಂದು ನಿಧನ ಹೊಂದಿರುತ್ತಾರೆ.

ಮೃತರ ಗೌರವಾರ್ಥ ಒಂದು ನಿಮಿಷ ಮೌನವನ್ನು ಆಚರಿಸ ಬೇಕೆಂದು ತಮ್ಮಲ್ಲಿ ಕೋರುತ್ತೇನೆ.

ಮೃತರ ಗೌರವಾರ್ಥ ಸದನದ ಎಲ್ಲಾ ಸದಸ್ಯರು ಎದ್ದು ನಿಂತು ಒಂದು ನಿಮಿಷ ಮೌವನ್ನಾಚರಿಸಿದರು)

ಅಧ್ಯಕ್ಷರು : ಈ ಸದನವು ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಮೃತರ ಕುಟುಂಬ ವರ್ಗದವರಿಗೆ ಕಳುಹಿಸಿ ಕೊಡಲಾಗುವುದು.